ಕೋಲಾರ ಪತ್ರಿಕೆ

Online Newspaper Clipping Service

**Dtd- Sunday, 1st, September- 2019**



# ಮೆಡಿಕಲ್ ಸೀಟ್ ನೀಡಿಕೆಯಲ್ಲಿ ವಂಚನೆ?

ಕೋಲಾರ ಆ ೩೧

ನಗರದ ಹೊರವಲಯದ ಟಮಕದ ಆರ್.ಎಲ್. ಜಾಲಪ್ಪ ವೈದ್ಯಕೀಯ ಆಸ್ಪತ್ರೆಯಲ್ಲಿ ಮೆಡಿಕಲ್ ಸೀಟ್ ಹಂಚಿಕೆಯಲ್ಲಿ ವಂಚನೆ ನಡೆಸಲಾಗಿದೆ ಎಂದು ಆರೋಪಿಸಲಾಗಿದೆ.

ಜಾಲಪ್ಪ ವೈದ್ಯಕೀಯ ಕಾಲೇಜಿನಲ್ಲಿ ನಡೆದ ವೈದ್ಯಕೀಯ ಕೋರ್ಸ್ ಪ್ರವೇಶದ ಕೌನ್ಸೆಲಿಂಗ್ ನಲ್ಲಿ ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳ ಬಳಿ ಹೆಚ್ಚು ಹಣವನ್ನು ಪಡೆದು ಸೀಟ್ ಕೊಡಲಾಗಿದೆ. ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಮನೆಗೆ ವಾಪಸ್ ಕಳುಹಿಸಲಾಗಿದೆ ಎಂದು ನೊಂದ ಪೋಷಕರು, ವಿದ್ಯಾರ್ಥಿಗಳು ದೂರಿದ್ದಾರೆ.

ಮೂರನೇ ಹಂತದ ಖಾಸಗಿ ಕೋಟಾದಲ್ಲಿ ೨೯ ಸೀಟ್ ಗಳಿಗೆ ನಡೆದ ಕೌನ್ಸೆಲಿಂಗ್‌ನಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮೋಸ ಎಸಗಲಾಗಿದೆ. ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳಿಂದ ಕೋಟಿ ಕೋಟಿ ಹಣ ಪಡೆದು ಸೀಟ್ ನೀಡಲಾಗಿದೆ. ಒಂದು ಸೀಟ್‌ಗೆ ಒಂದೂವರೆ ಕೋಟಿಯಿಂದ ಎರಡು ಕೋಟಿ ರೂ.ಗೆ ಮಾರಾಟ ಮಾಡಲಾಗಿದೆ ಎಂದು ಆಪಾದಿಸಿ ಹಲವಾರು ಪೋಷಕರು ಮತ್ತು ವಿದ್ಯಾರ್ಥಿಗಳು ಗಲ್‌ಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದಾರೆ.

ಅಂತರಗಂಗೆ



# ಮೆಡಿಕಲ್ ಸೀಟು ಹಂಚಿಕೆಯಲ್ಲಿ ವಂಚನೆ ಆರೋಪ

## ಆರ್.ಎಲ್. ಜಾಲಪ್ಪ ವೈದ್ಯಕೀಯ ಆಡಳಿತ ಮಂಡಳಿ ವಿರುದ್ಧ ದೂರು ದಾಖಲು

ಅಂತರಗಂಗೆ ಸುದ್ದಿ

ಕೋಲಾರ, ಆ.31- ಮೆಡಿಕಲ್ ಸೀಟ್ ಹಂಚಿಕೆಯಲ್ಲಿ ವಂಚನೆ ಆರೋಪದ ಅಡಿಯಲ್ಲಿ ಆರ್.ಎಲ್.ಜಾಲಪ್ಪ ವೈದ್ಯಕೀಯ ಕಾಲೇಜಿನ ಆಡಳಿತ ಮಂಡಳಿ ವಿರುದ್ಧ ಕೋಲಾರ ಗಲ್‌ಪೇಟೆ ಪೊಲೀಸ್ ಠಣೆಯಲ್ಲಿ ದೂರು ದಾಖಲಾಗಿದೆ.

ಕೋಲಾರ ಹೊರವಲಯದ ಟಮಕ ಬಳಿ ಇರುವ ಆರ್.ಎಲ್. ಜಾಲಪ್ಪ ವೈದ್ಯಕೀಯ ಕಾಲೇಜಿನಲ್ಲಿ ಶುಕ್ರವಾರ ನಡೆದ ಕೌನ್ಸಲಿಂಗ್‌ನಲ್ಲಿ ಕಡಿಮೆ ಅಂಕ ಪಡೆದ ವಿದ್ಯಾರ್ಥಿ ಗಳ ಬಳಿ ಹೆಚ್ಚು ಹಣ ಪಡೆದು ಸೀಟ್ ಕೊಟ್ಟ ಆರೋಪ ಎದುರಾಗಿದೆ.

ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳನ್ನು ಮನೆಗೆ ವಾಪಸ್ ಕಳೆಯಿಸಿದ ಆಡಳಿತ ಮಂಡಳಿ, ಮೂರನೇ ಹಂತದ ಖಾಸಗಿ ಕೋಟಾದಲ್ಲಿ 29 ಸಿಟ್\ಗಳಿಗೆ ಕೌನ್ಸಿಲಿಂಗ್ ನಡೆಸಿದೆ. ಕೌನ್ಸಲಿಂಗ್ ನಲ್ಲಿ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಮೋಸ, ಕಡಿಮೆ ಅಂಕ ಪಡೆದ ವಿದ್ಯಾರ್ಥಿಗಳಿಂದ ಕೋಟಿ ಕೋಟಿ ಹಣ ಪಡೆದು ಸೀಟ್ ನೀಡಿದ ಆರೋಪ.

ಈ ಬಗ್ಗೆ ನೊಂದ ಪೋಷಕರು ಹಾಗೂ ವಿದ್ಯಾರ್ಥಿಗಳು ಕೋಲಾರದ ಗಲ್ ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲು ಮಾಡಿದ್ದಾರೆ.

# ಮೆಡಿಕಲ್ ಸೀಟ್ ಹಂಚಿಕೆ ವಂಚನೆ ಆರೋಪ

■ **ವಿಕ ಸುದ್ದಿಲೋಕ** ಕೋಲಾರ

ಮೆಡಿಕಲ್ ಸೀಟ್ ಹಂಚಿಕೆಯಲ್ಲಿ ದೇವರಾಜ ಅರಸು ವೈದ್ಯಕೀಯ ಕಾಲೇಜಿನ ಆಡಳಿತ ಮಂಡಳಿ ಹೆಚ್ಚಿನ ಅಂಕ ಪಡೆದ ವಿದ್ಯಾರ್ಥಿಗಳಿಗೆ ಸೀಟು ನೀಡದೆ ವಂಚಿಸಿದೆ ಎಂದು ವಿದ್ಯಾರ್ಥಿಗಳ ಪೋಷಕರು ದೂರು ದಾಖಲಿಸಿದ್ದಾರೆ.

ಗುರುವಾರ, ಶುಕ್ರವಾರ ನಗರದ ಹೊರವಲಯದ ದೇವರಾಜ ಅರಸು ವೈದ್ಯಕೀಯ ಕಾಲೇಜಿನಲ್ಲಿ 29 ಸೀಟುಗಳಿಗೆ ಕೌನ್ಸ್ಲಿಂಗ್ ನಡೆಸಲಾಗಿದೆ. ಅತಿಹೆಚ್ಚು ರ್‍ಯಾಂಕ್ ಪಡೆದಿರುವ ವಿದ್ಯಾರ್ಥಿಗಳ ಬದಲಿಗೆ ಕಡಿಮೆ ಅಂಕ ಪಡೆದಿರುವವರಿಗೆ ಸೀಟು ಹಂಚಿಕೆ ಮಾಡಲಾಗಿದೆ ಎಂದು ಪೋಷಕರು ಆರೋಪಿಸಿದ್ದಾರೆ.

ಮೂರನೇ ಹಂತದ ಖಾಸಗಿ ಕೋಟಾದಲ್ಲಿ 29 ಸೀಟುಗಳಿಗೆ ಕೌನ್ಸ್ಲಿಂಗ್ ನಡೆಸಲಾಗಿದೆ. ಈ ವೇಳೆ ಆಡಳಿತ ಮಂಡಳಿಯವರು ಅತಿಹೆಚ್ಚಿನ ರ್‍ಯಾಂಕ್ ಪಡೆದುಕೊಂಡ ವಿದ್ಯಾರ್ಥಿಗಳಿಗೆ ಸೀಟು ನೀಡಲಾಗಿದೆ. ಆದರೆ, ಕೌನ್ಸ್ಲಿಂಗ್‌ಗೆ ಆಯ್ಕೆಯಾದ ವಿದ್ಯಾರ್ಥಿಗಳ ಮಾಹಿತಿ ನೀಡುತ್ತಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಇದರಿಂದ ರೊಚ್ಚಿಗೆದ್ದ ವಿದ್ಯಾರ್ಥಿಗಳ ಪೋಷಕರು ಶುಕ್ರವಾರ ಕೌನ್ಸ್ಲಿಂಗ್ ನಡೆಯುವ ಜಾಗದಲ್ಲಿಯೇ ಪ್ರತಿಭಟನೆ ನಡೆಸಿದ್ದು, ಶನಿವಾರ ಬೆಳಗ್ಗೆಯೂ ಕಾಲೇಜಿನ ಮುಂಭಾಗದಲ್ಲಿ ಧರಣಿ ನಡೆಸಿದ್ದಾರೆ. ಈ ಕುರಿತು ಗಲ್‌ಪೇಟೆಯಲ್ಲಿ ದೂರು ದಾಖಲಿಸಿರುವ ಪೋಷಕರು ತಮ್ಮ ಮಕ್ಕಳಿಗೆ ನ್ಯಾಯ ದೊರಕಿಸಿಕೊಡುವಂತೆ ಮನವಿ ಮಾಡಿದ್ದಾರೆ.